ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕ: 29.02.2024.

**ಮುಖ್ಯ ವಿಚಾರಣೆ: ವಾದಿಯ ಪರ ವಕೀಲರಿಂದ:**

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಇಂದು ನಾನು ದಾವೆಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ಹದಿನಾಲ್ಕು ಗಣಕೀಕೃತ ಪಹಣಿಗಳನ್ನು ಕ್ರಮವಾಗಿ ನಿಪಿ-1 ರಿಂದ 14 ಎಂದು, ಎರಡು ಗಣಕೀಕೃತ ಮ್ಯೂಟೇಷನ್‌ಗಳನ್ನು ಕ್ರಮವಾಗಿ ನಿಪಿ-15 ಮತ್ತು ನಿಪಿ-16 ಎಂದು, ಕಂದಾಯ ರಶೀದಿಯನ್ನು ನಿಪಿ-17 ಎಂದು, ದೃಢಿಕೃತ ಎರಡು ದಾನಪತ್ರಗಳನ್ನು ಕ್ರಮವಾಗಿ ನಿಪಿ-18 ಮತ್ತು ನಿಪಿ-19 ಎಂದು, ಎರಡು ನಮೂನೆ-15 ಗಳನ್ನು ಕ್ರಮವಾಗಿ ನಿಪಿ-20 ಮತ್ತು ನಿಪಿ-21 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು: 1 ರಿಂದ 3 ನೇ ಪ್ರತಿವಾದಿಗಳ ಪರ ವಕೀಲರಿಂದ:**

(1 ರಿಂದ 3 ನೇ ಪ್ರತಿವಾದಿಗಳು ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಏನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

<u>ಮರು ವಿಚಾರಣೆಃ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**